ಕರ್ನಾಟಕ ವಿಧಾನ ಸಭೆ, ಸಂಶೋಧನಾ ಹಾಗೂ ಉಲ್ಲೇಖನಾ ಶಾಖೆ

**KARNATAKA LEGISLATIVE ASSEMBLY, RESEARCH AND REFERENCE BRANCH**

ಪತ್ರಿಕಾ ತುಣುಕುಗಳು

**PAPER CLIPPINGS**

18

ಶಾಖೆ / ವಿಷಯ : DEPARTMENT / SUBJECT: ಗೃಹ - ಸಿ.ಡಿ. ಪ್ರಕರಣ

ಪತ್ರಿಕೆಯ ಹೆಸರು : NAME OF THE NEWS PAPER: ಕನ್ನಡ ಪ್ರಭ    ದಿನಾಂಕ : DATE 26/3/2021

# ಸೀಡಿ ಕೇಸ್: 1.5 ತಾಸಿನ ಅಸಲಿ ವಿಡಿಯೋ ಪತ್ತೆ

## ವ್ಯಾನಿಟಿ ಬ್ಯಾಗ್‌ನಲ್ಲಿ ಕ್ಯಾಮೆರಾ ಇಟ್ಟು ಚಿತ್ರೀಕರಣ

• ಕನ್ನಡಪ್ರಭ ವಾರ್ತೆ ಬೆಂಗಳೂರು 26/3/21

ಹದಿನೈದು ದಿನಗಳ ಸತತ ಕಾರ್ಯಾಚರಣೆ ಬಳಿಕ ಕೊನೆಗೂ ಮಾಜಿ ಸಚಿವರ ಸಿ.ಡಿ. ಪ್ರಕರಣದ ಅಸಲಿ ಅಥವಾ ಮೂಲ ವಿಡಿಯೋ ಪತ್ತೆ ಹಚ್ಚುವಲ್ಲಿ ವಿಶೇಷ ತನಿಖಾ ದಳ (ಎಸ್‌ಐಟಿ) ಯಶಸ್ಸು ಕಂಡಿದ್ದು, ಯುವತಿಯ ವ್ಯಾನಿಟಿ ಬ್ಯಾಗ್‌ನಲ್ಲಿ ರಹಸ್ಯ ಕ್ಯಾಮೆರಾ ಅಳವಡಿಸಿಯೇ ಖಾಸಗಿ ಕ್ಷಣಗಳನ್ನು ಸೆರೆ ಹಿಡಿಯಲಾಗಿದೆ ಎಂದು ತಿಳಿದು ಬಂದಿದೆ.



ಇದರೊಂದಿಗೆ ಲೈಂಗಿಕ ವಿವಾದದ ತನಿಖೆಗೆ ಮಹತ್ವದ ತಿರುವು ಸಿಕ್ಕಂತಾಗಿದ್ದು, ಯುವತಿಯ ಪರಿಚಯವೇ ಇಲ್ಲ ಎನ್ನುತ್ತಿದ್ದ ಮಾಜಿ ಸಚಿವರಿಗೆ ಇಕ್ಕಟ್ಟಿನ ಪರಿಸ್ಥಿತಿ ನಿರ್ಮಾಣವಾದಂತಾಗಿದೆ.

» 9

### ಯುವತಿಗೆ 6 ತಿಂಗಳು ಗೋವಾ ವಾಸ ಪ್ಲಾನ್!

ಬೆಂಗಳೂರು: ಸಿ.ಡಿ. ಪ್ರಕರಣದ ವಿವಾದಿತ ಯುವತಿಗೆ ಗೋವಾದಲ್ಲಿ 6 ತಿಂಗಳು ವಾಸ್ತವ್ಯ ಕಲ್ಪಿಸಲು ಆಕೆಯ ತಂಡ ಯೋಜಿಸಿತ್ತು. ಯುವತಿಯ ಆತಿಥ್ಯದ ಹೊಣೆಗಾರಿಕೆ ಹೊತ್ತಿದ್ದ ಕನಕಪುರ ತಾಲೂಕಿನ ಗ್ರಾನೈಟ್ ಉದ್ಯಮಿ ಶಿವಕುಮಾರ್ ಯುವತಿಯ ಸ್ನೇಹಿತೆ ಹೆಸರಿನಲ್ಲಿ ಗೋವಾದ ಹೋಟೆಲ್‌ವೊಂದರಲ್ಲಿ ಕೊಠಡಿ ಕಾಯ್ದಿರಿಸಿದ್ದ. ಆದರೆ ಗೋವಾದಲ್ಲಿ ಯುವತಿ ತಂಗಿರುವ ವಿಚಾರ ಎಸ್‌ಐಟಿಗೆ ತಿಳಿದಾಕ್ಷಣ ಆಕೆ ಅಲ್ಲಿಂದ ಬೇರೆಡೆಗೆ ತೆರಳಿದ್ದಾಳೆ ಎಂದು ತಿಳಿದುಬಂದಿದೆ.

ವಿವರ » 7